# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರವರ ಕಛೇರಿ, ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು, ಬೆಂಗಳೂರು-560 002

ಸಂಖ್ಯೆ: ಬಿ12(ಸಿ1)/ಸಿಜಿ/ಪಿಆರ್/38/2021-22 ದಿನಾಂಕ:
eoffice No. 13532

## ನೇಮಕಾತಿ ಆದೇಶ

ವಿಷಯ: ದಿವಂಗತ ವರದರಾಜು, ಪೌರಕಾರ್ಮಿಕರು ರವರ ಮಗಳಾದ ಕು|| ವಿ. ಹೇಮಾಶ್ರೀ ರವರನ್ನು ಅನುಕಂಪದ ಆಧಾರದ ಮೇಲೆ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಡಿಪಿಎಆರ್ 100 ಎಸ್‌ಸಿಎ 95, ದಿ: 12-09-96.
2) ಸದರಿ ಅರ್ಜಿದಾರರ ಮನವಿ ಪತ್ರದ ದಿನಾಂಕ: 10-01-2020.
3) ಪೊಲೀಸ್ ಇನ್ಸ್ ಪೆಕ್ಟರ್, ನಗರ ವಿಶೇಷ ಶಾಖೆ, ಆಡಳಿತ, ಪೊಲೀಸ್ ಕಮೀಷನರ್ ರವರ ಪರವಾಗಿ, ಬೆಂಗಳೂರು ನಗರ, ಬೆಂಗಳೂರು ರವರ ದೃಢೀಕರಣ ಪತ್ರ ದಿ: 03-03-2021.
4) ಸ.ಕಂ.ಅ (ಕೆಂಗೇರಿ) ರವರ ಸ್ಥಳ ಮಹಜರ್ ವರದಿ ದಿ: 01-06-2021.
5) ಸ.ಕಾ.ನಿ.ಅ, ಘನತ್ಯಾಜ್ಯ ನಿರ್ವಹಣೆ, ಚಾಮರಾಜಪೇಟೆ ರವರ ಮಹಜರ್ ವರದಿ.
6) ಜಂಟಿ ಆಯುಕ್ತರು (ಪಶ್ಚಿಮ) ರವರ ಅಧ್ಯಕ್ಷತೆಯಲ್ಲಿ ದಿ: 27-07-2021 ರಂದು ನಡೆದ ಅನುಕಂಪದ ಆಧಾರದ ನೇಮಕಾತಿ ಸಮಿತಿಯ ನಡವಳಿಗಳು.
7) ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ 31-08-2021 ರಂದು ನಡೆದ ಅನುಕಂಪದ ಆಧಾರದ ನೇಮಕಾತಿ ಸಮಿತಿಯ ನಡವಳಿಗಳು.
8) ಸಹಾಯಕ ನಿರ್ದೇಶಕರು (ಪರೀಕ್ಷೆ), ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರ ಪತ್ರ ದಿ: 24-09-2021

50
23/11/21

--------

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅನುಕಂಪದ ಆಧಾರದ ನೇಮಕಾತಿ ಕೋರಿ ಸಲ್ಲಿಸಲಾದ ಮನವಿಯನ್ನು ಪರಿಶೀಲಿಸಿ, ಜಂಟಿ ಆಯುಕ್ತರು (ಪಶ್ಚಿಮ) ರವರ ಅಧ್ಯಕ್ಷತೆಯಲ್ಲಿ ದಿನಾಂಕ: 27-07-2021 ರಂದು ನಡೆದ ಸಮಿತಿ ಸಭೆಯಲ್ಲಿ ಪರಿಶೀಲಿಸಿ ಮತ್ತು ಚರ್ಚಿಸಿ, ತೆಗೆದುಕೊಂಡಿರುವ ತೀರ್ಮಾನದಂತೆ, ದಿವಂಗತ ವರದರಾಜು, ಪೌರಕಾರ್ಮಿಕರು, ಬಿಲ್ಲೆ ಸಂಖ್ಯೆ: 4409/ಎ, ಸ.ಕಾ.ನಿ.ಅ, ಘನತ್ಯಾಜ್ಯ ನಿರ್ವಹಣೆ, ಚಾಮರಾಜಪೇಟೆ ವಿಭಾಗ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದವರು ಮೃತರಾಗಿದ್ದು, ನಿಯಮದಂತೆ ಸದರಿಯವರ ಮಗಳಾದ ಕು|| ವಿ. ಹೇಮಾಶ್ರೀ ರವರು ದ್ವಿತೀಯ ಪಿ.ಯು.ಸಿ. ವಿದ್ಯಾರ್ಹತೆ ಹೊಂದಿರುವುದರಿಂದ ಗ್ರೂಫ್ 'ಸಿ' ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ.

ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿನಾಂಕ: 31-08-2021 ರಂದು ನಡೆದ ಅನುಕಂಪದ ಆಧಾರದ ಮೇಲೆ ನೇಮಕಾತಿ ಅಂತಿಮ ಪರಿಶೀಲನಾ ಸಮಿತಿ ಸಭೆಯಲ್ಲಿ ಕು|| ವಿ. ಹೇಮಾಶ್ರೀ ರವರನ್ನು ಗ್ರೂಫ್ 'ಸಿ' ಹುದ್ದೆಯಾದ ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ. ಸದರಿ ಸಮಿತಿಗಳ ಶಿಫಾರಸ್ಸಿನ ಹಿನ್ನಲೆಯಲ್ಲಿ ನೇಮಕಾತಿ ಪ್ರಾಧಿಕಾರಿಯಾದ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರು ಕು|| ವಿ. ಹೇಮಾಶ್ರೀ ರವರ ಪ್ರಸ್ತಾವನೆಯನ್ನು ಪರಿಗಣಿಸಿ, ನೇಮಕಾತಿಗೆ ಅರ್ಹರೆಂದು ತೀರ್ಮಾನಿಸಿ ಅನುಮೋದಿಸಿರುತ್ತಾರೆ.

ಕು|| ವಿ. ಹೇಮಾಶ್ರೀ ಬಿನ್ ದಿವಂಗತ ವರದರಾಜು ರವರ ವಿವರಗಳು ಈ ಕೆಳಕಂಡಂತೆ ಇರುತ್ತವೆ.

| | | |
|---|---|---|
| 1. | ಹೆಸರು | ಕು|| ವಿ. ಹೇಮಾಶ್ರೀ |
| 2. | ಜನ್ಮ ದಿನಾಂಕ | 08-01-2002 (ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿರುವಂತೆ, ರಿ.ನಂ. 20170848542) |
| 3. | ವಿಳಾಸ | ನಂ. 424, ನಾಗದೇವನಹಳ್ಳಿ, ಕೆಂಗೇರಿ ಹೋಬಳಿ, ಬೆಂಗಳೂರು-560056 |
| 4. | ಪ್ರವರ್ಗ | ಪ್ರವರ್ಗ-2ಎ (ಕುರುಬ) (ದಿ: 17-06-2017 ರಂದು ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರು ವಿತರಿಸಿರುವ ಜಾತಿ ಪ್ರಮಾಣ ಪತ್ರ) |

ಉಲ್ಲೇಖ-(1)ರ ಸರ್ಕಾರಿ ಆದೇಶದ ಅನ್ವಯ ಹಾಗೂ ಉಲ್ಲೇಖ-(2) ರಿಂದ (5)ರ ವರೆಗಿನ ದಾಖಲಾತಿಗಳು ಮತ್ತು ವರದಿಗಳನ್ನಾಧರಿಸಿ ಉಲ್ಲೇಖ-(6) ಮತ್ತು (7)ರ ಸಭೆ ನಡವಳಿಗಳ ತೀರ್ಮಾನದಂತೆ, ಸದರಿಯವರನ್ನು ಅನುಕಂಪದ ಆಧಾರದ ಮೇಲೆ ವೇತನ ಶ್ರೇಣಿ ರೂ. 21400-42000ರಲ್ಲಿ ಗ್ರೂಪ್ "ಸಿ" ದರ್ಜೆಯಲ್ಲಿ (ದ್ವಿತೀಯ ದರ್ಜೆ ಸಹಾಯಕರು) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ಕಛೇರಿಯಲ್ಲಿ ಖಾಲಿ ಇರುವ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ನೇಮಕಾತಿ ಮಾಡಿದೆ.

**ಷರತ್ತುಗಳು**

1) ಕು|| ವಿ. ಹೇಮಾಶ್ರೀ ಬಿನ್ ದಿವಂಗತ ವರದರಾಜು, ಇವರು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಈ ಪತ್ರ ತಲುಪಿದ 7 ದಿವಸಗಳೊಳಗಾಗಿ, ದೇಹದಾರ್ಢ್ಯತೆ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ ಪ್ರಮಾಣ ಪತ್ರ ಮತ್ತು ಇತರೇ ಮೂಲ ದಾಖಲಾತಿಗಳೊಂದಿಗೆ ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ರವರ ಬಳಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಕರ್ತವ್ಯಕ್ಕೆ ಹಾಜರಾದ ಕೂಡಲೇ ಚರಾಸ್ತಿಗಳ ಮತ್ತು ಸ್ಥಿರಾಸ್ತಿಗಳ ವಿವರಣೆಯನ್ನು ತೋರಿಸುವ ಪಟ್ಟಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

2) ಈ ನೇಮಕಾತಿಯು 1977ರ ಕರ್ನಾಟಕ ನಾಗರಿಕ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಯಂತೆ 2 ವರ್ಷಗಳ ಪರೀಕ್ಷಾರ್ಥ ಅವಧಿಗೆ ಒಳಪಟ್ಟಿರುತ್ತದೆ. ಈ ಅವಧಿಯಲ್ಲಿ ತೃಪ್ತಿಕರ ಸೇವೆ ಸಲ್ಲಿಸಿ, ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್ / ಲೋಯರ್, ರೆವಿನ್ಯೂ ಲೋಯರ್, ಮುನಿಸಿಪಲ್ ಅಂಡ್ ಲೋಕಲ್ ಬೋರ್ಡ್ಸ್ ಪರೀಕ್ಷೆಗಳಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಪಾಸು ಮಾಡುವುದು ಕಡ್ಡಾಯಗೊಳಿಸಲಾಗಿದೆ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣ / ವಿನಾಯಿತಿ ಪಡೆದು, ಪರೀಕ್ಷಾರ್ಥ ಸೇವಾ ಅವಧಿಯನ್ನು ಘೋಷಿಸಿಕೊಳ್ಳುವುದು.

3) ಸರ್ಕಾರದ ಅಥವಾ ಸರ್ಕಾರದಿಂದ ಅಂಗೀಕೃತ ಹೊಂದಿದ ಸಂಸ್ಥೆಯಿಂದ ಒಂದು ವರ್ಷದ ಅವಧಿಯೊಳಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಎಸ್ ಸಿಆರ್ 2008, ದಿನಾಂಕ: 18-12-2012ರ ಆದೇಶದಂತೆ ಕಂಪ್ಯೂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಪ್ರಮಾಣ ಪತ್ರವನ್ನು ಸಲ್ಲಿಸುವುದು.

4) ಸದರಿಯವರು ಷರತ್ತು 2 ಮತ್ತು 3ನ್ನು ಪರೀಕ್ಷಾರ್ಥ ಅವಧಿ ಪೂರೈಸದಿದ್ದಲ್ಲಿ 1977ರ ಕರ್ನಾಟಕ ನಾಗರಿಕ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಗಳ ನಿಯಮ 5(1)(ಬಿ) ರನ್ವಯ ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಲಾಗುವುದೆಂದು ತಿಳಿಯುವುದು.

5) ಈ ನೇಮಕಾತಿಯನ್ನು ಪಡೆಯಲು ಅಭ್ಯರ್ಥಿಯು ಯಾವುದಾದರೂ ನಕಲು ಇಲ್ಲವೇ ಫೋರ್ಜರಿ ದಾಖಲಾತಿಗಳನ್ನು ಅಥವಾ ಸುಳ್ಳು ಮಾಹಿತಿಯನ್ನು ಸಲ್ಲಿಸಿರುವುದು ದೃಢಪಟ್ಟಲ್ಲಿ 2020ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಅಧಿಕಾರಿ ಮತ್ತು ನೌಕರರುಗಳ ಸಾಮಾನ್ಯ ವೃಂದ ಮತ್ತು ನೇಮಕಾತಿ) ನಿಯಮಗಳು, 1977ರ ಸಾಮಾನ್ಯ ನೇಮಕಾತಿ ನಿಯಮಾವಳಿ ನಿಯಮ (20), 1977ರ ಕರ್ನಾಟಕ ಮುನಿಸಿಪಲ್ ನಿಯಮಾವಳಿ ನಿಯಮ (25)ರ ರೀತ್ಯಾ ನೇಮಕಾತಿ ಹೊಂದುವ ಸಲುವಾಗಿ ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ನಗರ ಪಾಲಿಕೆಗೆ ವಂಚಿಸಿರುತ್ತಾರೆಂದು ಭಾವಿಸಿ, 1957ರ ಕರ್ನಾಟಕ ನಾಗರಿಕ ಸೇವೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಾವಳಿಯ ನಿಯಮ 11ರ ರೀತಿ ನೇಮಕಾತಿ ಆದೇಶವನ್ನು ರದ್ದುಪಡಿಸಲಾಗುವುದು ಹಾಗೂ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದೆಂದು ತಿಳಿಯುವುದು.

6) ಪಿಂಚಣಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31-03-2006 ರಂತೆ, ಪಿಂಚಣಿಗೆ ಅರ್ಹರಿರುತ್ತೀರಿ.

7) ಸದರಿಯವರು ಅಗತ್ಯ ದಾಖಲೆಗಳನ್ನು ಕೂಡಲೇ ಒದಗಿಸಿ ನೂತನ ಪಿಂಚಣಿ ಯೋಜನೆಯಲ್ಲಿ ನೊಂದಾಯಿಸಲು ಸೂಚಿಸಿದೆ ಹಾಗೂ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು PRAN ಸಂಖ್ಯೆ ಸೃಜಿಸಲು ಹಾಗೂ ಕಟಾವಣೆಗೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದಂತೆ)

26/10/21

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

25/10/21 25/10/21

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ/ಆಡಳಿತ/ಹಣಕಾಸು) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ವಲಯ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಜಂಟಿ ಆಯುಕ್ತರು (ಪಶ್ಚಿಮ) ರವರಿಗೆ ಕಳುಹಿಸಿದೆ.
: ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ರವರಿಗೆ ಅಭ್ಯರ್ಥಿಯ ಭಾವಚಿತ್ರದೊಂದಿಗೆ ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.
: ಸ.ಕಾ.ನಿ.ಅ, ಘನತ್ಯಾಜ್ಯ ನಿರ್ವಹಣೆ, ಚಾಮರಾಜಪೇಟೆ ರವರಿಗೆ ಮೃತ ನೌಕರರ ಸೇವಾಪುಸ್ತಕದೊಂದಿಗೆ ಕಳುಹಿಸಿದೆ.
: ಸಹಾಯಕ ಆಯುಕ್ತರು, ನೇಮಕಾತಿ ವಿಭಾಗರವರಿಗೆ ಕಳುಹಿಸಿದೆ.
: ಮು.ಲೆ.ಅ/ಮು.ಲೆ.ಪ/ಉ.ನಿ. (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಅಭ್ಯರ್ಥಿಗೆ / ಕಛೇರಿ ಕಡತಕ್ಕೆ.